ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

**ಮೆಚ್ಚುಗೆ** ರೋಗಿಗಳ ಆರೈಕೆಯಲ್ಲಿ ಲೋಪವೆಸಗಿದರ ಆಸ್ಪತ್ರೆಯ ಮುಖ್ಯಸ್ಥರೇ ಹೊಣೆ: ಸಚಿವ ಸುಧಾಕರ್ ಎಚ್ಚರಿಕೆ

# ಪತ್ನಿ, ತಂದೆಗೆ ಸೋಂಕಿದ್ದರೂ ಸುಧಾಕರ್ ಕರ್ತವ್ಯಪ್ರಜ್ಞೆ

## 4 ತಾಸು ಅಧಿಕಾರಿಗಳ ಜತೆ ವಿಡಿಯೋ ಸಂವಾದ | ರೋಗಿಗಳ ಆರೈಕೆ ಬಗ್ಗೆ ಎಚ್ಚರ ವಹಿಸಲು ಸೂಚನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ತಮ್ಮ ತಂದೆ, ಪತ್ನಿ, ಪುತ್ರಿಗೆ ಕೊರೋನಾ ಸೋಂಕು ತಗುಲಿರುವ ಆತಂಕ, ಒತ್ತಡದ ನಡುವೆಯೂ ವಿಚಲಿತರಾಗದೆ ವೈದ್ಯಕೀಯ ಶಿಕ್ಷಣಸಚಿವಸುಧಾಕರ್ ಅವರುಮಂಗಳವಾರ ಬಿಬಿಎಂಪಿ ಅಧಿಕಾರಿಗಳ ಜತೆ 4 ತಾಸು ವೀಡಿಯೋ ಸಂವಾದ ನಡೆಸಿ ಕರ್ತವ್ಯಪ್ರಜ್ಞೆ ಮೆರೆದಿದ್ದಾರೆ.

ಕೊರೋನಾ ರೋಗಿಗಳಿಗೆ ಕಳಪೆ ಆರೈಕೆ ಹಾಗೂ ಆಹಾರ ನೀಡಲಾಗುತ್ತಿದೆ ಎಂಬ ವ್ಯಾಪಕ ದೂರಿನ ಹಿನ್ನೆಲೆಯಲ್ಲಿ ಸಂವಾದ ನಡೆಸಿದಸಚಿವರು, ಕೊರೋನಾಸೋಂಕಿತರಿಗೆ ಚಿಕಿತ್ಸೆ ನೀಡುತ್ತಿರುವ ಆಸ್ಪತ್ರೆಗಳಲ್ಲಿ ರೋಗಿಗಳ ಆರೈಕೆ ಮತ್ತು ಸೌಲಭ್ಯದಲ್ಲಿ ಯಾವುದೇ ಲೋಪ ಕಂಡು ಬಂದರೆ ಆಯಾ ಆಸ್ಪತ್ರೆಯ ನಿರ್ದೇಶಕರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದರು.

↘ 9



ಅಧಿಕಾರಿಗಳ ಜತೆ ಸಚಿವ ಡಾ.ಕೆ.ಸುಧಾಕರ್ ವಿಡಿಯೋ ಸಂವಾದ

# ಸುಧಾಕರ್ ಪತ್ನಿ-ಪುತ್ರಿಗೂ ಸೋಂಕು

## ಸುಧಾಕರ್, ಪುತ್ರನ ಪರೀಕ್ಷಾ ಫಲಿತಾಂಶ ನೆಗೆಟಿವ್
## ಆರೋಗ್ಯ ವಿಚಾರಿಸಿದ ಅಮಿತ್ ಶಾ, ಸಂತೋಷ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ಅವರ ಪತ್ನಿ ಹಾಗೂ ಪುತ್ರಿಗೆ ಕೊರೋನಾ ಸೋಂಕಿರುವುದು ಮಂಗಳವಾರ ದೃಢಪಟ್ಟಿದೆ. ಸಚಿವ ಸುಧಾಕರ್ ಮತ್ತು ಪುತ್ರರ ವರದಿ ನೆಗೆಟಿವ್ ಬಂದಿದೆ. ಪರೀಕ್ಷಾ ವರದಿ ಸುದ್ದಿ ಬರುತ್ತಿದ್ದಂತೆ ಕೇಂದ್ರ ಸಚಿವ ಅಮಿತ್ ಶಾ ಮತ್ತು ಆರ್‌ಎಸ್‌ಎಸ್ ಮುಖಂಡ ಸಂತೋಷ್ ಅವರು ಸಚಿವರಿಗೆ ದೂರವಾಣಿ ಕರೆ ಮಾಡಿ ಆರೋಗ್ಯ ವಿಚಾರಿಸಿದರು.

ಸೋಮವಾರವಷ್ಟೇ ಸುಧಾಕರ್ ಅವರ ತಂದೆ ಹಾಗೂ ಅವರ ಮನೆಯಲ್ಲೇ ಅಡುಗೆ ಕೆಲಸಕ್ಕಿದ್ದ ಇಬ್ಬರು ಸೇರಿದಂತೆ ಮೂವರಿಗೆ ಸೋಂಕು ದೃಢಪಟ್ಟಿತ್ತು.

'ನಮ್ಮ ಕುಟುಂಬದ ಕೋವಿಡ್ ಪರೀಕ್ಷಾ ವರದಿ ಬಂದಿದ್ದು, ನನ್ನ ಪತ್ನಿ ಹಾಗೂ ಮಗಳಿಗೆ ಕೊರೋನಾ ಪಾಸಿಟಿವ್ ಬಂದಿದೆ. ಅವರಿಬ್ಬರೂ ನಿಗದಿತ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ನನ್ನ ಇಬ್ಬರು ಗಂಡುಮಕ್ಕಳು ಮತ್ತು ನನಗೆ ಕೊರೋನಾ ನೆಗೆಟಿವ್ ಬಂದಿದೆ ಹಾಗೂ ನಮ್ಮ ಆಪ್ತ ಸಿಬ್ಬಂದಿಗಳ ವರದಿಯೂ ನೆಗೆಟಿವ್ ಬಂದಿದೆ.

↘ 8

15

# ಸುಧಾಕರ್ ಪತ್ನಿ, ಪುತ್ರಿಗೂ ಸೋಂಕು

ಮೊದಲ ಪುಟದಿಂದ

ನಮ್ಮೆಲ್ಲರ 'ಒಳಿತಿಗಾಗಿ ಪ್ರಾರ್ಥಿಸಿದ, ಶುಭಕೋರಿದ ಎಲ್ಲರಿಗೂ ನಾನು ಆಭಾರಿಯಾಗಿದ್ದೇನೆ' ಎಂದು ಸುಧಾಕರ್ ಟ್ವೀಟರ್‌ನಲ್ಲಿ ತಿಳಿಸಿದ್ದಾರೆ

## ಆರೋಗ್ಯ ವಿಚಾರಿಸಿದ ಅಮಿತ್ ಶಾ, ಸಂತೋಷ್



ಸಚಿವ ಡಾ.ಕೆ. ಸುಧಾಕರ್ ಅವರ ತಂದೆ, ಪತ್ನಿ ಹಾಗೂ ಮಗಳು ಕೊರೋನಾ ಸೋಂಕಿಗೆ ಒಳಗಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರು ಕರೆ ಮಾಡಿ ಶೀಘ್ರ ಗುಣಮುಖರಾಗುವಂತೆ ಹಾರೈಸಿದ್ದಾರೆ.

ಮಂಗಳವಾರ ಸುಧಾಕರ್‌ಗೆ ದೂರವಾಣಿ ಕರೆ ಮಾಡಿ ಅಮಿತ್ ಶಾ ಅವರು ಕುಟುಂಬದ ಆರೋಗ್ಯ ವಿಚಾರಿಸಿ, ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಈ ವಿಚಾರವನ್ನು ಟ್ವೀಟ್ ಮಾಡಿರುವ ಸಚಿವ ಸುಧಾಕರ್ ಅವರು, 'ತಮ್ಮ ಕೆಲಸ ಕಾರ್ಯಗಳ ಮಧ್ಯೆ ನನ್ನ ಮತ್ತು ನನ್ನ ಕುಟುಂಬದ ಒಳಿತಿಗೆ ಕಾಳಜಿ ತೋರಿ ಶುಭ ಹಾರೈಸಿದ್ದಕ್ಕಾಗಿ ಅಮಿತ್ ಶಾ ಅವರಿಗೆ ಕೃತಜ್ಞತೆ' ಎಂದು ತಿಳಿಸಿದ್ದಾರೆ.

**101 ತೆಂಗಿನಕಾಯಿ ಒಡೆದು ಪೂಜೆ:** ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ಅವರ ಪತ್ನಿ, ಮಗಳು ಮತ್ತು ತಂದೆಗೆ ಕೊರೋನಾ ಸೋಂಕು ಕಾಣಿಸಿದ್ದು, ಕೂಡಲೇ ಅವರು ಗುಣಮುಖರಾಗಿವಾಪಸ್‌ಬರಬೇಕೆಂದು ಪ್ರಾರ್ಥಿಸಿ ಚಿಕ್ಕಬಳ್ಳಾಪುರ ಕ್ಷೇತ್ರಾದ್ಯಂತ ಸುಧಾಕರ್ ಮತ್ತು ಕೇಶವರೆಡ್ಡಿ ಅಭಿಮಾನಿಗಳು ಮಂಗಳವಾರ ವಿವಿಧ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಸಚಿವರ ಬೆಂಬಲಿಗರು, ಅಭಿಮಾನಿಗಳು ಮಂಗಳವಾರ ನಾನಾ ಕಡೆಗಳಲ್ಲಿ ವಿಶೇಷ ಪೂಜೆಗಳನ್ನು ನೆರವೇರಿಸಿ, ಆರೋಗ್ಯ ಸುಧಾರಣೆಗೆ ಪ್ರಾರ್ಥಿಸಿದರು. ಚೆನ್ನಕೇಶವ ಸ್ವಾಮಿ ದೇವಾಲಯದಲ್ಲಿ 101 ತೆಂಗಿನಕಾಯಿ ಒಡೆಯಲಾಗಿದೆ. ಬಯಲಾಂಜನೇಯಸ್ವಾಮಿ ದೇಗುಲದಲ್ಲಿ 101 ತೆಂಗಿನಕಾಯಿ ಒಡೆದು ಪೂಜೆ ಸಲ್ಲಿಸಲಾಗಿದೆ.

# ಸುಧಾಕರ್ ಕರ್ತವ್ಯಪ್ರಜ್ಞೆ

ಮೊದಲ ಪುಟದಿಂದ

ತಮ್ಮ ತಂದೆ, ಪತ್ನಿ ಮತ್ತು ಪುತ್ರಿಗೆ ಕೊರೋನಾ ಸೋಂಕು ತಗುಲಿದ್ದ ಒತ್ತಡದ ನಡುವೆ ಸ್ವತಃ ಕ್ವಾರಂಟೈನ್‌ಗೆ ಒಳಗಾಗಿರುವ ಸುಧಾಕರ್ ಕರ್ತವ್ಯಪರತೆ ತೋರಿದ ಪರಿಯಿದು.

**ಲೋಪ ಮರುಕಳಿಸಬಾರದು:** ಬಿಬಿಎಂಪಿಯ ಹಿರಿಯ ಅಧಿಕಾರಿಗಳು ಹಾಗೂ ಕೋವಿಡ್ ಆಸ್ಪತ್ರೆಯ ನಿರ್ದೇಶಕರೊಂದಿಗೆ ಸಂವಾದ ನಡೆಸಿದ ಅವರು, ರೋಗಿಗಳನ್ನು ದಾಖಲು ಮಾಡಿಕೊಳ್ಳುವಲ್ಲಿನ ಗೊಂದಲಗಳು, ಕಳಪೆ ಆಹಾರ ವಿತರಣೆ, ಸ್ವಚ್ಛತೆ ಕಾಪಾಡಿಕೊಳ್ಳದ ಸಂಬಂಧ ಕಳೆದ ಮೂರು ದಿನಗಳಿಂದ ದೂರುಗಳು ಬರುತ್ತಿವೆ. ಕೊರೋನಾ ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸೆ ಮತ್ತು ಸೌಲಭ್ಯಗಳ ವಿಷಯದಲ್ಲಿ ರಾಜಿಯಾಗುವ ಪ್ರಶ್ನೆಯೇ ಇಲ್ಲ. ಈ ರೀತಿಯ ಘಟನೆಗಳು ಮರುಕಳಿಸದಂತೆ ಎಚ್ಚರವಹಿಸಬೇಕು. ಲೋಪಗಳು ಮುಂದುವರೆದರೆ ಆಯಾ ಆಸ್ಪತ್ರೆಗಳ ನಿರ್ದೇಶಕರುಗಳನ್ನು ಹೊಣೆ ಮಾಡಲಾಗುವುದು. ಅಷ್ಟೇ ಅಲ್ಲ, ಇಂತಹ ಸಂಸ್ಥೆಗಳ ಮುಖ್ಯಸ್ಥರನ್ನು ಬದಲಾಯಿಸಿ ಆ ಹೊಣೆಯನ್ನು ಹಿರಿಯ ಕೆಎಎಸ್ ಅಧಿಕಾರಿಗೆ ನೀಡಲಾಗುವುದು ಎಂಬ ಗಂಭೀರ ಎಚ್ಚರಿಕೆ ನೀಡಿದರು. ಚಿಕಿತ್ಸೆ ನೀಡಲು ತಜ್ಞ ಮತ್ತು ಹಿರಿಯ ವೈದ್ಯರು ಬರುತ್ತಿಲ್ಲ ಎಂಬ ದೂರುಗಳಿವೆ. ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ತಜ್ಞರು, ವೈದ್ಯರು ಮತ್ತು ಪಿಜಿ ವಿದ್ಯಾರ್ಥಿಗಳ ಪಟ್ಟಿಯನ್ನು ಆಯಾ ವಾರ್ಡ್, ಐಸಿಯು ಮುಂದೆ ಪ್ರಕಟಣಾ ಫಲಕದಲ್ಲಿ ಹಾಕಬೇಕು. ಜೊತೆಗೆ ಕ್ಯಾಮೆರಾ ಅಳವಡಿಸಿ ಕರ್ತವ್ಯಕ್ಕೆ ಹಾಜರಾಗುವವರು ತಮ್ಮ ಹೆಸರು ಹೇಳಿ ಒಳ ಹೋಗಬೇಕು. ಒಳಗೆ ಮತ್ತು ಹೊರಗೆ ಹೋಗುವ ಮುನ್ನ ಕಡ್ಡಾಯವಾಗಿ ಸಮಯ ನಮೂದಿಸಿ ಸಹಿ ಮಾಡಲೇಬೇಕು. ಈ ವ್ಯವಸ್ಥೆ ಬುಧವಾರ ಜಾರಿಯಾಗಬೇಕು ಎಂದು ಸೂಚಿಸಿದರು. ಕೊರೋನಾ ಕಾರ್ಯಚಟುವಟಿಕೆಗಳಿಗೆ ನಿಯೋಜಿಸಿರುವ ಹಿರಿಯ ಅಧಿಕಾರಿಗಳು ಆಸ್ಪತ್ರೆಗಳ ಮುಖ್ಯಸ್ಥರು, ಕಾರ್ಯದರ್ಶಿ, ಅಪರ ಮುಖ್ಯಕಾರ್ಯದರ್ಶಿಯವರೊಂದಿಗೆ ಸಮನ್ವಯ ಕಾಪಾಡಿಕೊಳ್ಳಬೇಕು. ಆಯಾ ದಿನದ ಬೆಳವಣಿಗೆಗಳ ಬಗ್ಗೆ ಮಾಹಿತಿ ನೀಡಿ ಸೂಚನೆಗಳನ್ನು ಪಾಲಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ತೋರಿಸಿದರೆ ಶಿಸ್ತುಕ್ರಮ ಕೈಗೊಳ್ಳಬೇಕಾಗುತ್ತದೆ ಎಂದರು. ಸೋಂಕಿತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ಹಾಸಿಗೆಗಳನ್ನು ಮೀಸಲು ಇರಿಸಲಾಗಿದೆ. ಅದನ್ನು ಸರಿಯಾಗಿ ಖಚಿತಪಡಿಸಿಕೊಳ್ಳಬೇಕು. ಇದಲ್ಲದೆ, ಕೋವಿಡ್ ಕೇರ್ ಸೆಂಟರ್‌ಗಳು, ಅಲ್ಲಿ ನೀಡುವ ಸೌಲಭ್ಯಗಳಲ್ಲೂ ಲೋಪಗಳಾಗದಂತೆ ನೋಡಿಕೊಳ್ಳಬೇಕು. ಸೋಂಕಿತರನ್ನು ಆಸ್ಪತ್ರೆಗಳಿಂದ ಆಂಬ್ಯುಲೆನ್ಸ್ ಅಥವಾ ಸರ್ಕಾರಿ ಬಸ್‌ಗಳ ಮೂಲಕ ಕೋವಿಡ್ ಕೇರ್ ಸೆಂಟರ್‌ಗಳಿಗೆ ಸ್ಥಳಾಂತರಿಸಬೇಕು ಎಂದು ನಿರ್ದೇಶನ ನೀಡಿದರು. ರೋಗ ಲಕ್ಷಣಗಳಿದ್ದು, ಬಳಲುತ್ತಿರುವ ರೋಗಿಗಳನ್ನು ಮಾತ್ರವೇ ಕೋವಿಡ್ ಆಸ್ಪತ್ರೆಗಳಲ್ಲಿ ಇರಿಸಿಕೊಂಡು ಚಿಕಿತ್ಸೆ ನೀಡಬೇಕು ಎಂದು ಸೂಚನೆ ನೀಡಿದರು.